# ನವೆಂಬರ್ ಅಂತ್ಯಕ್ಕೆ ಬೆಳಗಾವಿಯಲ್ಲಿ ಅಧಿವೇಶನ: ಸಿಎಂಗೆ ಹೊರಟ್ಟಿ ಪತ್ರ

**ಬೆಂಗಳೂರು:** ಚಳಿಗಾಲದ ಅಧಿವೇಶನವನ್ನು ನವೆಂಬರ್ ಅಂತ್ಯ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಬೆಳಗಾವಿಯಲ್ಲಿ ನಡೆಸುವಂತೆ ವಿಧಾನ ಪರಿಷತ್



ಸಭಾಪತಿ ಬಸವರಾಜ ಹೊರಟ್ಟಿ, ಸಿಎಂ ಬೊಮ್ಮಾಯಿ ಅವರಿಗೆ ಪತ್ರ ಬರೆದಿದ್ದಾರೆ. ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ 25 ಜನರ ಸದಸ್ಯರು 2022ರ ಜನವರಿ 5ರಂದು ನಿವೃತ್ತಿಯಾಗಲಿದ್ದಾರೆ. ಈ ಸದಸ್ಯರು ಅಧಿವೇಶನದಲ್ಲಿ ಪಾಲ್ಗೊಂಡು ತಮ್ಮ ಕ್ಷೇತ್ರಗಳಿಗೆ ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ನವೆಂಬರ್ ಅಂತ್ಯ, ಡಿಸೆಂಬರ್ ಮೊದಲ ವಾರದಿಂದ ವಿಧಾನಮಂಡಲ ಅಧಿವೇಶನ ನಡೆಸಬೇಕು. ಈಗಾಗಲೇ ಬೆಳಗಾವಿಯಲ್ಲಿ ಅಧಿವೇಶನ ನಡೆಸಲು ಒಪ್ಪಿರುವ ಕಾರಣ ದಿನಾಂಕವನ್ನು ಮೊದಲೇ ಪ್ರಕಟಿಸುವಂತೆ ಮನವಿ ಮಾಡಿದ್ದಾರೆ.

ಕನ್ನಡಪ್ರಭ Mon, 01 November 2021
https://kpepaper.asianetnews.